# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – **560 002**.


ಸಂಖ್ಯೆ: BBMP/Addl.Dir/ JDNORTH/LP/0194/2014-15 ದಿನಾಂಕ: 15-09-2015

## ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ)

ವಿಷಯ: ಆಸ್ತಿ ಸಂಖ್ಯೆ: 19/1, 2, 3, 4, 5, 7, 46/1, 46/2, 47, ದೇವರಬೀಸನಹಳ್ಳಿ ಮತ್ತು ಬೆಳ್ಳಂದೂರು ಗ್ರಾಮ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 150 ಮಹದೇವಪುರ ವಲಯ, ಬೆಂಗಳೂರು ಇಲ್ಲಿರುವ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಬಿಲ್ಡಿಂಗ್ – 2 ರಲ್ಲಿನ, ಟವರ್ – 5 & 6 ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/ Addl.Dir/ JDNORTH/ 0194/ 201415 ದಿನಾಂಕ: 16–03–2015

2) ತಮ್ಮ ಮನವಿ ಪತ್ರ ದಿನಾಂಕ: 31–07–2015

* * * * * * *

ಆಸ್ತಿ ಸಂಖ್ಯೆ. 19/1, 2, 3, 4, 5, 7, 46/1, 46/2, 47, ದೇವರಬೀಸನಹಳ್ಳಿ ಮತ್ತು ಬೆಳ್ಳಂದೂರು ಗ್ರಾಮ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 150 ಮಹದೇವಪುರ ವಲಯ, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ ಬಿಲ್ಡಿಂಗ್ – 1 ರಲ್ಲಿ ಟವರ್ – 1 ಮತ್ತು 2 ರಲ್ಲಿ 2 ತಳ + ನೆಲ + ಮೇಲಿನ 14 ಅಂತಸ್ತುಗಳು ಮತ್ತು ಬಿಲ್ಡಿಂಗ್ – 2 ರಲ್ಲಿನ, ಟವರ್ – 3 ರಲ್ಲಿ 2 ತಳ + ನೆಲ + ಮೇಲಿನ 14 ಅಂತಸ್ತುಗಳು, ಟವರ್ – 4 ರಲ್ಲಿ 2 ತಳ + ನೆಲ + ಮೇಲಿನ 13 ಅಂತಸ್ತುಗಳು ಮತ್ತು ಟವರ್ – 5&6 ರಲ್ಲಿ 2 ತಳ + ನೆಲ + ಮೇಲಿನ 14 ಅಂತಸ್ತುಗಳ ಒಟ್ಟಾರೆ 392 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ಈ ಕಛೇರಿಯಿಂದ ದಿನಾಂಕ: 16–03–2015 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಆರ್.ಸಿ.ಸಿ. ಸ್ಥಂಭಗಳನ್ನು ನಿರ್ಮಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 24–08–2015 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರದ ಬಾಬ್ತು ಶುಲ್ಕ ಒಟ್ಟು ರೂ. 95,000/– ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: TP/JDTPNRT/01/2015-16/Sep/0004 ದಿನಾಂಕ: 01–09–2015 ರಂದು ಹಾಗೂ ರೂ. 16,685/– ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: TP/JDTPNRT/01/2015-16/Sep/0031 ದಿನಾಂಕ: 15–09–2015 ರಂದು ಸಂದಾಯ ಮಾಡಿರುವುದರಿಂದ, ಬಿಲ್ಡಿಂಗ್ – 2 ರಲ್ಲಿನ, ಟವರ್ – 5 & 6 ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

3. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

4. ಮಂಜೂರಾದ ನಕ್ಷೆಯಲ್ಲಿನ ಉಳಿದ ಬ್ಲಾಕ್‌ಗಳ ಕಾಮಗಾರಿಯನ್ನು ಪ್ರಾರಂಭಿಸಿ, ಸ್ತಂಭಗಳನ್ನು ಅಳವಡಿಸಿದ ನಂತರ ಸದರಿ ಬ್ಲಾಕ್‌ಗಳಿಗೆ ಪ್ರಾರಂಭಿಕ ಪ್ರಮಾಣಪತ್ರಕ್ಕಾಗಿ ಪ್ರತ್ಯೇಕವಾಗಿ ಮನವಿ ಸಲ್ಲಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

15/9/15.

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

15/9 15/9 15/9/15

ಗೆ,
ಮೆ: ಸ್ಟರ್ಲಿಂಗ್ ಅರ್ಬನ್ ಇನ್‌ಫ್ರಾ ಪ್ರಾಜೆಕ್ಟ್ಸ್ ಪ್ರೈ ಲಿ
# 8, ಕಬ್ಬನ್ ರಸ್ತೆ, ಲೆವೆಲ್ – 5,
ಪ್ರೆಸ್ಟೀಜ್ ನೆಬುಲ, ಬೆಂಗಳೂರು – 560 001